For more job news visit : www.kpscvaani.com

ಆತ್ಮ ಯೋಜನೆಯಡಿ ಅರ್ಜಿ ಆಹ್ವಾನ

2026–27 ನೇ ಸಾಲಿನಲ್ಲಿ ಆತ್ಮ ಯೋಜನೆಯಡಿ ಜಂಟಿ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಹಾವೇರಿ ಮತ್ತು ವಿವಿಧ ತಾಲ್ಲೂಕುಗಳಲ್ಲಿ ಹೊಸದಾಗಿ ನೇರಗುತ್ತಿಗೆ ಆಧಾರದ ಮೇಲೆ ತಾಲ್ಲೂಕುಗಳಿಗೆ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು (BTM) ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕರು (ATM) ಹುದ್ದೆಗೆ ಕೃಷಿ ಮತ್ತು ಕೃಷಿ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿದೆ.

ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು (BTM) ಹುದ್ದೆಗೆ ಕೃಷಿ ಮತ್ತು ಕೃಷಿ ಸಂಬಂಧಿತ ಸ್ನಾತಕೋತ್ತರ ಪದವಿಯನ್ನು ಹೊಂದಿರಬೇಕು ಹಾಗೂ ಕೃಷಿ ಮತ್ತು ಕೃಷಿ ಸಂಬಂಧಿತ ಕ್ಷೇತ್ರಗಳಲ್ಲಿ ವ್ಯವಸ್ಥಾಪಕ ಅಥವಾ ಮೇಲ್ವಿಚಾರಣಾ ಸಾಮರ್ಥ್ಯದಲ್ಲಿ ಕನಿಷ್ಠ 5 ವರ್ಷಗಳ ಅನುಭವ ಹೊಂದಿದ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಿದೆ.

Sl.N	Designation	No. of Posts	Educational Qualification	Qualification: Suggested Expérience
1	Block Technology Manager (BTM)	1-General	Post Graduate in Agri and Allied sector with computer skills or Agri-Graduates with atleast 5 years working experience as ATM.	Minimum 2 Years field experience in Agri Related activities
2	Assistant Technology Manager (ATM)	Total- 6 General -4 SC-1 ST-1	Graduate (Agri. and Allied sectors)/post Graduate (Agri.& Allied Sectors)	Minimum one year Experience in Agri Related Activities.

ಅಭ್ಯರ್ಥಿಗಳು 45 ವರ್ಷದ ಒಳಗಿನ ವಯೋಮಿತಿಯನ್ನು ಹೊಂದಿರಬೇಕು ಅಥವಾ ಈಗಾಗಲೇ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕರು (BTM) ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕರು (ATM) ಗಳಾಗಿ ಕಾರ್ಯನಿರ್ವಹಿಸಿ ಅನುಭವ ಹೊಂದಿದಲ್ಲಿ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರುತ್ತದೆ. ಅಭ್ಯರ್ಥಿಗಳು ಛಾಯಾಚಿತ್ರ ಲಗತ್ತಿಸಿದ ವೈಯಕ್ತಿಕ ಮಾಹಿತಿ [Resume with Photo], ವಿದ್ಯಾರ್ಹತೆ [Educational Qualification] ದಾಖಲೆ, ಅನುಭವ ಪ್ರಮಾಣ ಪತ್ರ [Experience], ಆಧಾರ ಪ್ರತಿ [Aadhar], ಕಂಪ್ಯೂಟರ್ [Computer Knowledge], ಜಾತಿ ಪ್ರಮಾಣ ಪತ್ರ [Caste Certificate] ಈ ಎಲ್ಲಾ ದಾಖಲೆಗಳ ದೃಢೀಕೃತ ಪ್ರತಿಗಳನ್ನು [Attested copies] ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕರ ಕಛೇರಿ, ಜಿಲ್ಲಾಡಳಿತ ಭವನ, ದೇವಗಿರಿ–581110 ಇವರಿಗೆ **ಅಂಚೆ ಮುಖಾಂತರ ಅಥವಾ ಖುದ್ದಾಗಿ ದಿನಾಂಕ :–25–06–2026 ರ ಸಾಯಂಕಾಲ 5:00 ಗಂಟೆಯೊಳಗಾಗಿ ತಲುಪುವಂತೆ ಅರ್ಜಿ ಸಲ್ಲಿಸಲು ಸೂಚಿಸಿದೆ.** ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಈ ಕಛೇರಿಗೆ ಸಂಪರ್ಕಿಸಲು ಕೋರಲಾಗಿದೆ.

ಯೋಜನಾ ನಿರ್ದೇಶಕರು, ಆತ್ಮ
ಹಾಗೂ ಜಂಟಿ ಕೃಷಿ ನಿರ್ದೇಶಕರು
ಹಾವೇರಿ